ಬೆಂಗಳೂರು ಸೆಂಟ್ರಲ್ ಜೈಲ್.

ತಾರೀಖು 11ನೆ ಡಿಸೆಂಬರ್ 1907.

ಸ್ಯ 1908ನೆ ಇಸವಿ ಫೆಬ್ರವರಿ 1ರ ಲಾಗಾಯ್ತು ಸ್ಯ 1909ನೆ ಇಸವಿ ಜನವರಿ 31ರ ವರಿಗೆ, ಆ ಎರಡು ದಿವಸಗಳೂ ಸೇರಿ, 1 ವರ್ಷ ತನಕ, ಬೆಂಗಳೂರು ಸೆಂಟ್ರಲ್ ಜೈಲಿನಲ್ಲಿ ಖೈದಿಗಳ ಉಪಯೋಗಕ್ಕಾಗಿ ಈ ಕೆಳಗೆ ನಮೂದಿಸುವ ಸರಕನ್ನು ಸರಬರಾಯಿ ಮಾಡಲು ಕಂಟ್ರಾಕ್ಟು ತೆಗದುಕೊಳ್ಳುವದಕ್ಕಾಗಿ, ಕವರಿನಲ್ಲಿ ಹಾಕಿ ಮೊಹರು ಮಾಡಿದ ದರಖಾಸ್ತುಗಳನ್ನು ಸ್ಯ 1908ನೆ ಇಸವಿ ಜನವರಿ 18ನೆ ತಾರೀಖು ಶನಿವಾರ ಬೆಳಿಗ್ಗೆ 10 ಘಂಟೆಯ ವರಿಗೆ, ಬೆಂಗಳೂರು ಸೆಂಟ್ರಲ್ ಜೈಲ್ ಸೂಪರ್‌ಟೆಂಡೆಂಟರು ತೆಗೆದುಕೊಳ್ಳುವರೆಂದು ಇದರಿಂದ ಘೋಷಿಸ ಮಾಡಿದೆ.

2. ಮೇಲೆ ಕಂಡ ತಾರೀಖಾದ ತರುವಾಯ ದರಖಾಸ್ತುಗಳನ್ನು ಹಿಡಿಯುವದಿಲ್ಲ.

3. ದರಖಾಸ್ತು ಕವರಿನ ಮೇಲಿಭಾಗದಲ್ಲಿ ಬರದಿರಬೇಕಾದ ಮೇಲ್ವಿಳಾಸವೇನೆಂದರೆ :—

"ಕುರೀ ಮಾಂಸದ ಸರಬರಾಯಿ ದರಖಾಸ್ತು"

4. ಕುರಿ ಮಾಂಸದ ಸರಬರಾಯಿಗೆ 75 ರೂಪಾಯಿ, ನಗದಾಗಿಯಾಗಲಿ ಕರೆನ್ಸೀ ನೋಟಿನ ಮೂಲಕವಾಗಿಯಾಗಲಿ ಠೇವಣಾತಿಯನ್ನು ದರಖಾಸ್ತಿನ ಸಂಗಡ ಹಾಜರ್ಮಾಡಿದ ಹೊರತು, ದರಖಾಸ್ತುಗಳನ್ನು ಹಿಡಿಯುವದಿಲ್ಲ.

5. ಬೆಂಗಳೂರು ಸೆಂಟ್ರಲ್ ಜೈಲ್ ಸೂಪರ್‌ಟೆಂಡೆಂಟರವರು ಮೇಲೆ ನಮೂದಾದ ತಾರೀಖಿನಲ್ಲಿ ಆ ಕಾಲದೊಳು ಹಾಜರಿರುವದಕ್ಕೆ ಇಷ್ಟವುಳ್ಳಂಥಾ ದರಖಾಸ್ತುದಾರರ ರೂಬರೂ ಸದರೀ ದರಖಾಸ್ತುಗಳನ್ನು ತಮ್ಮ ಆಫೀಸಿನಲ್ಲಿ ಒಡೆಯುವರು.

6. ಮಾಂಸವನ್ನು ಒಂದು ರೂಪಾಯಿಗೆ ಇಪ್ಪು ಪೌಂಡು ತೂಕದೆ ಮೇರೆ ಸರಬರಾಯಿ ಮಾಡಲಾದೀತೆಂದು ಎಲ್ಲಾ ದರಖಾಸ್ತುಗಳಲ್ಲಿಯೂ ದರವು ನಮೂದಾಗಿರತಕ್ಕದ್ದು. ಮತ್ತು ಸರಬರಾಯಿ ಮಾಡತಕ್ಕ ಮಾಂಸವು ಬಳ್ಳೇದಾಗಿಯೂ ಸೂಪರ್‌ಟೆಂಡೆಂಟರವರ ಮಂಜೂರಾತಿಗೆ ಬಳಪಟ್ಟಿರತಕ್ಕದ್ದು.

ಸಂವತ್ಸರದ ಅಂದಾಜಾ ಖರ್ಚು.

ಮೂಳೆ ಇಲ್ಲದ ಮಾಂಸ—20,000 ಪೌಂಡುಗಳು.

ಮೇಲೆ ಕಂಡ ಪರಿಮಾಣದನೇಲೆ ಇಪ್ಪಿಪ್ಪೆ ಆಗಬೇಕೆಂದು ಖಾತರಿ ಯಾವುದೂ ಬೊರೆಯುವುದಿಲ್ಲ.

7. ಸೂಪರ್‌ಟೆಂಡೆಂಟರವರು ಯಾವ ದರಖಾಸ್ತನ್ನೇ ಆಗಲಿ ಯಾವ ಕಾರಣವನ್ನೂ ಕೊಡದೆ ತಿರಸ್ಕರಿಸುವ ಹಕ್ಕನ್ನು ಉಳಿಸಿಕೊಂಡಿದಾರೆ.

8. ಯಾರ ದರಖಾಸ್ತನ್ನು ಮಂಜೂರ್ಮಾಡಿಕೊಳ್ಳುತ್ತಾರೆಯೋ ಅಂಥಾ ದರಖಾಸ್ತುದಾರನು ಹಾಜರ್ಮಾಡಿದ ಠೇವಣೀ ಮೊಬಲಗು ಇಟ್ಟುಕೊಳ್ಳಲ್ಪಡುವದು. ಮತ್ತು ಆತನ ದರಖಾಸ್ತು ಮಂಜೂರಾಗಿಧೆ ಎಂದು ಆತನಿಗೆ ತಿಳಿಯಪಡಿಸಿದ ಬಂದು ವಾರದೊಳಗಾಗಿ ಆತನು ಕಂಟ್ರಾಕ್ಟು ಕರಾರನ್ನು ಬರೆದುಕೊಡದೇ ಹೋದರೂ ಸರಿಯೇ, ಅಥವಾ 150 ರೂಪಾಯಿ, ನಗದಾಗಿಯಾಗಲಿ ಸರ್ಕಾರೀ ಬಂಡುಗಳ ಮೂಲಕವಾಗಿಯಾಗಲಿ ಸೆಕ್ಯೂರಿಟಿಯನ್ನು ಕೊಡಬೆ ಇದ್ದರೂ ಸರಿಯೆ ಮೇಲೆ ಕಂಡ ಠೇವಣೀ ಮೊಬಲಗು ಶಿವಾಯಿ ಜಮಾವಾಗಿ ತೆಗದುಕೊಳ್ಳಲಾದೀತು.

9. ಕಂಟ್ರಾಕ್ಟರು ಯಾ ಇಜಾರೆದಾರನಿಗೆ ನಗದು ಹಣ ಮುಂಗಡವಾಗಿ ಪಾವತಿ ಮಾಡಲಾರದು. ಸಾಮಾನುಗಳನ್ನು ಸರಬರಾಯಿ ಮಾಡಿದ್ದಕ್ಕಾಗಿ ಹಣವನ್ನು ಬೆಂಗಳೂರು ಸೆಂಟ್ರಲ್ ಜೈಲ್ ಸೂಪರ್‌ಟೆಂಡೆಂಟರವರು ಪ್ರತಿ ತಿಂಗಳ ಗುರೆ ತಾರೀಖಾದ ತರುವಾಯ ಸಾಧ್ಯವಾದ ಮಟ್ಟಿಗೂ ಜಾಗ್ರತೆಯಲ್ಲಿ ಪಾವತಿ ಮಾಡುವರು.

10. ಕುರೀ ಮಾಂಸವು ಪ್ರತಿ ದಿನವೂ ಬೆಳಿಗ್ಗೆ 7 ಘಂಟೆ ವಳಗಾಗಿ ಜೈಲಿನಲ್ಲಿ ಸಿದ್ಧಪಡಿಸತಕ್ಕದ್ದು.

11. ಕಂಟ್ರಾಕ್ಟನ್ನು ಷಿಕ್ಕಿ ಇಜಾರೆಯಾಗಿ ಕೊಡಕೂಡದು.

12. ಕಂಟ್ರಾಕ್ಟು ಪರತ್ತಿಗೆ ಏನಾದರೂ ವಿರುದ್ಧವಾಗಿ ನಡೆದರೂ ಸರಿಯೆ, ಗುಣದಲ್ಲಿ ಕಡಮೆಯಾಗಿರತಕ್ಕ ಮಾಂಸವನ್ನು ಸರಬರಾಯಿ ಮಾಡಿದರೂ ಸರಿಯೆ, ಬೆಂಗಳೂರು ಸೆಂಟ್ರಲ್ ಜೈಲ್ ಸೂಪರ್‌ಟೆಂಡೆಂಟರವರು ಮುನಾಸಬು ಅರಿತು 50 ರೂಪಾಯಿಗಳಿಗೆ ಹೆಚ್ಚದೆ ಜುರ್ಮಾನೆಯನ್ನು ವಸೂಲ್ಮಾಡಬಹುದು; ಪದೇಪದೇ ಕರಾರಿಗೆ ತಪ್ಪಿಹೋದರೆ ಕಂಟ್ರಾಕ್ಟನ್ನು ರದ್ದು ಮಾಡಿ ಸೆಕ್ಯೂರಿಟಿಯನ್ನು ಸರಕಾರಕ್ಕೆ ಮುಟ್ಟುಗೋಲಾಗಿ ತೆಗದುಕೊಳ್ಳಬಹುದು.

13. ಕಂಟ್ರಾಕ್ಟು ಕರಾರಿಗೆ ವಿರೋಧವಾಗಿ ನಡೆದ ಸಂಗತಿಗಳೆಲ್ಲೆಲ್ಲಾ ಸದರೀ ಸೆಂಟ್ರಲ್ ಜೈಲ್ ಸೂಪರ್‌ಟೆಂಡೆಂಟರ ಫೈಸಲೆ ಆಖೈರ್ ಫೈಸಲಾಗಿರತಕ್ಕದ್ದು.

14. ಮತ್ತೆ ಯಾವ ಸಂಗತಿ ಬೇಕಾಗಿದ್ದರೂ ಸೂಪರ್‌ಟೆಂಡೆಂಜರ ಆಫೀಸಿನಲ್ಲಿ ವಿಚಾರಿಸಿ ತಿಳಿದುಕೊಳ್ಳಬಹುದು.

15. ಈ ಕಂಟ್ರಾಕ್ಟುಗಳು ಮೈಸೂರು ಜೈಲ್ ಇನ್‌ಸ್ಪೆಕ್ಟರ್ ಜನರಲ್‌ರವರ ಮಂಜೂರಾತಿಗೆ ಬಳಪಟ್ಟು ಇರುವವು.

16. ಕಂಟ್ರಾಕ್ಟುದಾರರು ಇಜಾರೆಯನ್ನು ತೆಗದುಕೊಂಡ ತರುವಾಯ ತಮ್ಮ ಕರಾರಿನಂತೆ ನಡಿಯಲು ಇಷ್ಟಪಡದಿದ್ದರೆ ಬಂದು ತಿಂಗಳಿಗೆ ಮುಂಚಿತವಾಗಿಯೇ ನೋಟಿಸ್ ಕೊಡಬೇಕು ಮತ್ತು ಅವರ ಸೆಕ್ಯೂರಿಟಿ ಹಣವನ್ನು ಸರಕಾರಕ್ಕೆ ಬಿಟ್ಟುಬಿಡಬೇಕು.

17. ಕಂಟ್ರಾಕ್ಟುದಾರರು ಸರಬರಾಯಿ ಮಾಡಿದ ಬಿನಸಿ ಬಿಲ್ಲುಗಳನ್ನು ಹಣ ಪಾವತಿ ಬಗ್ಗೆ ಸೂಪರ್‌ಟೆಂಡೆಂಟರವರು ಹೊರಡಿಸಿ ಮಾಡಿದ ತಾರೀಖು ಅಥವಾ ಅದಕ್ಕೆ ತತ್ಪೂರ್ವವಾಗಲಿ ಹಾಜರು ಮಾಡಬೇಕು. ತಪ್ಪಿದರೆ ಸೂಪರ್‌ಟೆಂಡೆಂಟರವರು ಸದರೀ ತಾರೀಖು ತರುವಾಯ ಹಾಜರು ಮಾಡಿದ ಬಿಲ್ಲುಗಳಿಗೆ ಹಣ ಪಾವತಿ ಮಾಡಲು ಇನ್ಕಾರು ಮಾಡುವರು. ಇಜಾರೆದಾರರು ತಪ್ಪಿ ಹೋಗುವದರಿಂದ ಸರ್ಕಾರಕ್ಕೆ ಆಗುವ ನಷ್ಟವನ್ನೂ ಅಥವಾ ಕಂಟ್ರಾಕ್ಟಿನಲ್ಲಿ ನಮೂದಾಗುವ ಪದಾರ್ಥಗಳನ್ನೂ ಸರ್ಕಾರದವರು ಕಂಟ್ರಾಕ್ಟು ದರಕ್ಕಿಂತಲೂ ಹೆಚ್ಚು ದರದ ಮೇರೆ ಬಾಜಾರದಲ್ಲಿ ಕೊಂಡುಕೊಂಡರೆ ಆ ನಷ್ಟವನ್ನೂ ಇಜಾರೆದಾರರು ಸರ್ಕಾರಕ್ಕೆ ಭರ್ತಿಮಾಡಿ ಕೊಡಬೇಕು. ವಿಚಾರ—ಮೇಲೆ ನಮೂದಾದ ಕಂಟ್ರಾಕ್ಟುಗಳ ವಿಷಯದಲ್ಲಿ ಯಾವ ವಿಧವಾದ ರಿಯಾಯಿತಿಯೂ ಬೊರೆಯಲಾರದು.